# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1666 |
| 2) | ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನಸಭೆಯಿಂದ ಚುನಾಯಿತರಾದವ |
| 3) | ಉತ್ತರಿಸಬೇಕಾದ ದಿನಾಂಕ | : 18-03-2026 |
| 4) | ಉತ್ತರಿಸಬೇಕಾದ ಸಚಿವರು | : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು |

<table>
<tr><th></th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ದಕ್ಷಿಣ ಕನ್ನಡ ಜಿಲ್ಲೆಯ ಮೀನುಗಾರರನ್ನು ಆರ್ಥಿಕವಾಗಿ ಮೇಲೆತ್ತಲು ಸೂಕ್ತ ಹಾಗೂ ಅತ್ಯಂತ ಸಂಘಟಿತ ಮಾರುಕಟ್ಟೆ ಒದಗಿಸಬೇಕಾದ ಅನಿವಾರ್ಯತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಈಗಾಗಲೇ ಕೈಗೊಂಡಿರುವ ಕ್ರಮಗಳೇನು;</td><td>
ಹೌದು.<br><br>
ಈ ನಿಟ್ಟಿನಲ್ಲಿ ಕರ್ನಾಟಕ ಮೀನುಗಾರಿಕೆ ಅಭಿವೃದ್ಧಿ ನಿಗಮದ ವತಿಯಿಂದ ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿಯ ನೆರವಿನೊಂದಿಗೆ ಹಾಗೂ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಈ ಕೆಳಗಿನ ಮಾರುಕಟ್ಟೆಗಳನ್ನು ನಿರ್ಮಿಸಲಾಗಿದೆ.<br>
(ರೂ. ಲಕ್ಷಗಳಲ್ಲಿ)
<table>
<tr><th>ಸ್ಥಳ</th><th>ಅಂದಾಜು ಮೊತ್ತ</th><th>ಸಂಸ್ಥೆ</th></tr>
<tr><td>ಸುಳ್ಯ</td><td>64.72</td><td>ರಾಷ್ಟ್ರೀಯ ಮೀನುಗಾರಿಕೆ ಅಭಿವೃದ್ಧಿ ಮಂಡಳಿ</td></tr>
<tr><td>ಬಜಪೆ</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಕೆಮ್ರಾಲ್</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಗಂಜಿಮಠ</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಹಳೆಯಂಗಡಿ</td><td>50.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಸಿದ್ಧಕಟ್ಟೆ</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಮಾಣಿ</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
<tr><td>ಮಂಗಳ ಪೇಟೆ</td><td>10.00</td><td>ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ</td></tr>
</table>
ಕರ್ನಾಟಕ ಅಭಿವೃದ್ಧಿ ಪ್ರಾಧಿಕಾರ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ ಮತ್ತು ಮೀನುಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಈ ಕೆಳಗಿನ ಮಾರುಕಟ್ಟೆಗಳನ್ನು ನಿರ್ಮಿಸಲಾಗಿದೆ.
<table>
<tr><th>ಸ್ಥಳ</th><th>ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ)</th></tr>
<tr><td>ವಿಟ್ಲ</td><td>30.00</td></tr>
<tr><td>ಕೊಲ್ನಾಡು ಗ್ರಾಮ ಸಾಲೆತ್ತೂರು</td><td>25.00</td></tr>
<tr><td>ಬೆಳ್ತಂಗಡಿ</td><td>30.00</td></tr>
<tr><td>ಪಾಣೆ ಮಂಗಳೂರು</td><td>52.327</td></tr>
<tr><td>ಕಿನ್ನಿಗೋಳಿ</td><td>76.66</td></tr>
</table>
</td></tr>
<tr><td>ಆ)</td><td>ಮಂಗಳೂರು ಮೀನುಗಾರಿಕೆ ಬಂದರಿನ 3ನೇ ಹಂತದ ಉಳಿಕೆ ಕಾಮಗಾರಿಗಳನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆಯೇ; ಒದಗಿಸಿರುವ ಅನುದಾನದ ವಿವರಗಳೇನು;</td><td>
ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮೀನುಗಾರಿಕೆ ಬಂದರಿನ 3ನೇ ಹಂತದ ವಿಸ್ತರಣೆ ಯೋಜನೆಯ ಉಳಿಕೆ ಕಾಮಗಾರಿಯನ್ನು ಅಂದಾಜು ವೆಚ್ಚ ರೂ.49.50 ಕೋಟಿಗಳಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಕಾಮಗಾರಿ ಪ್ರಗತಿಯಲ್ಲಿದೆ.<br><br>
2025-26 ನೇ ಸಾಲಿನಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರು ಮೀನುಗಾರಿಕೆ ಬಂದರಿನ 3ನೇ ಹಂತದ ವಿಸ್ತರಣೆ ಯೋಜನೆಯ ಉಳಿಕೆ ಕಾಮಗಾರಿಗೆ ರೂ. 750.00 ಲಕ್ಷಗಳ ಅನುದಾನ ಒದಗಿಸಲಾಗಿರುತ್ತದೆ.
</td></tr>
</table>

ಇ) ಬಂದರುಗಳ ಆಧುನೀಕರಣ ಹಾಗೂ ಕರಾವಳಿಯಲ್ಲಿ ಮೀನುಗಾರಿಕೆಯ ಸಮಗ್ರ ಅಭಿವೃದ್ಧಿಗಾಗಿ ಬಹು ದೃಷ್ಟಿಕೋನದ ಯೋಜನೆಯನ್ನು ಸರ್ಕಾರ ತ್ವರಿತವಾಗಿ ಕೈಗೊಂಡು ಮೀನುಗಾರಿಕೆಯ ಸಂಪೂರ್ಣ ಅಭಿವೃದ್ಧಿಗೆ ಅಗತ್ಯ ಕ್ರಮ ವಹಿಸುವುದೇ? (ವಿವರ ನೀಡುವುದು)

ಹೌದು.

ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ ಯಡಿ ಹಾಲಿ ಇರುವ ಮೀನುಗಾರಿಕೆ ಬಂದರುಗಳ ಆಧುನೀಕರಣ ಹಾಗೂ ಮೀನುಗಾರಿಕೆ ಬಂದರು ಮತ್ತು ಮೀನುಗಾರಿಕೆ ಇಳಿದಾಣ ಕೇಂದ್ರಗಳಲ್ಲಿ ನಿರ್ವಹಣಾ ಹೂಳೆತ್ತುವಿಕೆ ಕಾಮಗಾರಿಗಳನ್ನು ಒಟ್ಟು ಮೊತ್ತ ರೂ.8457.77 ಲಕ್ಷಗಳ ವೆಚ್ಚದಲ್ಲಿ ಕೈಗೊಳ್ಳಲು ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಅದರಂತೆ ಕೆಳಕಂಡ ಮೀನುಗಾರಿಕೆ ಬಂದರುಗಳ ಆಧುನೀಕರಣ ಕಾಮಗಾರಿಗಳು ಪ್ರಗತಿಯಲ್ಲಿವೆ.

| ಕ್ರ. ಸಂ | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 01 | ಮಂಗಳೂರು ಮೀನುಗಾರಿಕೆ ಬಂದರಿನ ಆಧುನೀಕರಣ ಕಾಮಗಾರಿ | 3,747.10 |
| 02 | ಮಲ್ಪೆ ಮೀನುಗಾರಿಕೆ ಬಂದರಿನ ಆಧುನೀಕರಣ ಕಾಮಗಾರಿ | 1,252.00 |
| 03 | ಗಂಗೊಳ್ಳಿ ಮೀನುಗಾರಿಕೆ ಬಂದರಿನ ಆಧುನೀಕರಣ ಕಾಮಗಾರಿ | 2,218.00 |

ಹೂಳೆತ್ತುವ ಕಾಮಗಾರಿಗಳು

| ಕ್ರ. ಸಂ | ಕಾಮಗಾರಿ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) |
|---|---|---|
| 01 | ಆಮದಳ್ಳಿ ಮೀನುಗಾರಿಕೆ ಬಂದರಿನಲ್ಲಿ ಹೂಳೆತ್ತುವ ಕಾಮಗಾರಿ | 561.00 |
| 02 | ಬೇಲಿಕೇರಿ-ಹಾರವಾಡ ಮೀನುಗಾರಿಕೆ ಬಂದರಿನಲ್ಲಿ ಹೂಳೆತ್ತುವ ಕಾಮಗಾರಿ | 414.08 |
| 03 | ತದಡಿ ಮೀನುಗಾರಿಕೆ ಬಂದರಿನಲ್ಲಿ ಹೂಳೆತ್ತುವ ಕಾಮಗಾರಿ | 265.59 |

ಇದಲ್ಲದೆ ಕರಾವಳಿ ಮೀನುಗಾರಿಕೆಯ ಸಮಗ್ರ ಅಭಿವೃದ್ಧಿಗಾಗಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

01. ಕೇಂದ್ರ ಪುರಸ್ಕೃತ ಪ್ರಧಾನಮಂತ್ರಿ ಮತ್ಸ್ಯಸಂಪದ ಯೋಜನೆ ಯಡಿ ಮಂಜೂರಾದ ಸಾಮಾನ್ಯ ಚಟುವಟಿಕೆಗಳೊಂದಿಗೆ ಕರಾವಳಿ ಜಿಲ್ಲೆಗಳಲ್ಲಿ ಈ ಕೆಳಗಿನ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

- ಕೃತಕ ಬಂಡೆಗಳ ಅಳವಡಿಕೆ (ARTIFICIAL REEF).
- ದೋಣಿಗಳಲ್ಲಿ Transponder ಅಳವಡಿಕೆ.
- TED (Turtle Excluder Devices) ಅಳವಡಿಕೆ.
- Climate Resilient Coastal Fishermen Villages ರಡಿ ವಿವಿಧ ಘಟಕಗಳು (CRCFV).

| | | |
|---|---|---|
| | | 02. ಮಂಜುಗಡ್ಡೆ ಸ್ಥಾವರಗಳು ಬಳಸುವ ವಿದ್ಯುತ್ ಮೇಲೆ ಸಹಾಯಧನ.<br>03. ವಾಣಿಜ್ಯ ಬ್ಯಾಂಕುಗಳಿಂದ ಪಡೆದ ಸಾಲದ ಬಡ್ಡಿ ವ್ಯತ್ಯಾಸವನ್ನು ತುಂಬುವುದು.<br>04. ಸಾಂಪ್ರದಾಯಿಕ ಮೋಟರೀಕೃತ MO ದೋಣಿಗಳಿಗೆ ಸೀಮೆಎಣ್ಣೆ ಸರಬರಾಜು<br>05. ಯಾಂತ್ರಿಕೃತ ಮೀನುಗಾರಿಕೆ ದೋಣಿಗಳಿಗೆ ರಾಜ್ಯ ಮಾರಾಟ ಕರ ರಹಿತ ಡೀಸೆಲ್ ವಿತರಣೆ.<br>06. ಕಡಲ ಮೀನುಗಾರರಿಗೆ ಉಳಿತಾಯ ಮತ್ತು ಪರಿಹಾರ ಯೋಜನೆ.<br>07. ಕರಾವಳಿ ಕೊಂಡಿ ರಸ್ತೆಗಳ ನಿರ್ಮಾಣ.<br>08. ರಾಜ್ಯದಲ್ಲಿ ನೋಂದಣಿಯಾಗಿರುವ ಮೋಟರೀಕೃತ ದೋಣಿಗಳಿಗೆ ಇಂಜಿನ್ ಖರೀದಿಗೆ ಸಹಾಯಧನ. |

ಸಂಖ್ಯೆ: ಪಸಂಮೀ ಇ-72 ಮೀಇಯೋ 2026

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು